## ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು

ಸಂಖ್ಯೆ:ಎ8/ಎಸ್‌ಎಸ್‌ಎಲ್‌ಸಿ/ದೈ.ಶಿ.ನಿ/56/2021-22 ದಿನಾಂಕ:22.03.2022

:: ಸುತ್ತೋಲೆ ::

ವಿಷಯ:- ಮಾರ್ಚ್/ಏಪ್ರಿಲ್ 2022ರ ಮಾಹೆಯಲ್ಲಿ ನಡೆಯಲಿರುವ 2021-22ನೇ ಸಾಲಿನ ಎಸ್‌ಎಸ್‌ಎಲ್‌ಸಿ ಮುಖ್ಯ ಪರೀಕ್ಷೆಗೆ ಹಾಜರಾಗುವ ವಿದ್ಯಾರ್ಥಿಗಳ ಸಾಮಾಜಿಕ ಅಂತರ ಕಾಪಾಡುವ ದೃಷ್ಟಿಯಿಂದ ಪರೀಕ್ಷಾ ಕೇಂದ್ರಗಳಿಗೆ ದೈಹಿಕ ಶಿಕ್ಷಣ ಶಿಕ್ಷಕರನ್ನು ಅಥವಾ ಇತರೆ ಶಿಕ್ಷಕರನ್ನು ನಿಯೋಜಿಸುವ ಕುರಿತು.

ಉಲ್ಲೇಖ:- 1.ಸರ್ಕಾರದ ಆದೇಶ ಸಂಖ್ಯೆ ಇಪಿ 197 ಎಸ್‌ಎಲ್‌ಬಿ 2021 ದಿನಾಂಕ:06.12.2021.
2.ಕ.ಪ್ರೌ.ಶಿ.ಪ.ಮಂಡಳಿ ಎಸ್‌ಓಪಿ ಸುತ್ತೋಲೆ ಸಂಖ್ಯೆ: ಎ8/ಎಸ್.ಎಸ್.ಎಲ್.ಸಿ/ಎಸ್.ಓ.ಪಿ/49/2021-22 ದಿನಾಂಕ:14.03.2022.

* * * * *

2021-22ನೇ ಸಾಲಿನ ಎಸ್.ಎಸ್.ಎಲ್.ಸಿ ಮುಖ್ಯ ಪರೀಕ್ಷೆಯನ್ನು ದಿನಾಂಕ:28.03.2022 ರಿಂದ 11.04.2022ರವರೆಗೆ ನಡೆಸಲಾಗುತ್ತಿದೆ. ಕೋವಿಡ್-19ರ ಹಿನ್ನೆಲೆಯಲ್ಲಿ ಪರೀಕ್ಷಾ ಕಾರ್ಯದಲ್ಲಿ ಪಾಲ್ಗೊಳ್ಳುವ ಎಲ್ಲಾ ಅಧಿಕಾರಿಗಳು, ಶಿಕ್ಷಕರು ಹಾಗೂ ಸಿಬ್ಬಂದಿಯವರು ಮತ್ತು ವಿದ್ಯಾರ್ಥಿಗಳ ಸುರಕ್ಷತಾ ದೃಷ್ಟಿಯಿಂದ Covid-19 Technical Advisory Committee (TAC), ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಬೆಂಗಳೂರು ಇವರಿಂದ ಅನುಮೋದನೆ ಪಡೆದು ಉಲ್ಲೇಖ-2ರಂತೆ ಎಸ್.ಓ.ಪಿ ಯನ್ನು ಹೊರಡಿಸಲಾಗಿರುತ್ತದೆ.

ಮುಂದುವರೆದು, ಕೋವಿಡ್-19 ಸಂಬಂಧ ವಿದ್ಯಾರ್ಥಿಗಳ ಸುರಕ್ಷತಾ ಹಿತದೃಷ್ಟಿಯಿಂದ ಪರೀಕ್ಷಾ ಕೇಂದ್ರದ ಆವರಣದಲ್ಲಿ ವಿದ್ಯಾರ್ಥಿಗಳು ಗುಂಪು-ದಟ್ಟಣೆ ಸೇರುವುದನ್ನು ನಿಯಂತ್ರಿಸಲು ಹಾಗೂ ದೈಹಿಕ ಅಂತರವನ್ನು ಕಾಯ್ದುಕೊಳ್ಳುವ ದೃಷ್ಟಿಯಿಂದ ರಾಜ್ಯದ ಎಲ್ಲಾ ಪರೀಕ್ಷಾ ಕೇಂದ್ರಗಳಿಗೆ ಪ್ರೌಢಶಾಲಾ ದೈಹಿಕ ಶಿಕ್ಷಣ ಶಿಕ್ಷಕರನ್ನು ಅಥವಾ ದೈಹಿಕ ಶಿಕ್ಷಣ ಶಿಕ್ಷಕರು ಲಭ್ಯವಿಲ್ಲದೇ ಇದ್ದಲ್ಲಿ ಇತರೆ ಶಿಕ್ಷಕರನ್ನು ನಿಯೋಜಿಸಲು ತಿಳಿಸಿದೆ. ನಿಯೋಜಿತ ಶಿಕ್ಷಕರು, ವಿದ್ಯಾರ್ಥಿಗಳು ಪರೀಕ್ಷಾ ಕೇಂದ್ರಕ್ಕೆ ಬರುವ ಮುನ್ನ ಹಾಜರಿದ್ದು, ಪರೀಕ್ಷಾ ಕೇಂದ್ರದಲ್ಲಿ ವಿದ್ಯಾರ್ಥಿಗಳು ಗುಂಪು ಸೇರುವುದನ್ನು ಹಾಗೂ ವಿದ್ಯಾರ್ಥಿಗಳ ನಡುವೆ ದೈಹಿಕ ಅಂತರ ಕಾಯ್ದುಕೊಳ್ಳುವ ಕುರಿತು ಉಲ್ಲೇಖಿತ-2ರ ಎಸ್.ಓ.ಪಿ ಯಂತೆ ಕಾರ್ಯನಿರ್ವಹಿಸಲು ಸೂಕ್ತ ಮಾರ್ಗದರ್ಶನ ನೀಡಲು ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ) ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ತಿಳಿಸಿದೆ.

22/3/22

(ಹೆಚ್.ಎನ್.ಗೋಪಾಲಕೃಷ್ಣ)
ನಿರ್ದೇಶಕರು (ಪರೀಕ್ಷೆಗಳು)

**ರವರಿಗೆ,**

1. ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ ಮತ್ತು ಜಿಲ್ಲಾ ನೋಡಲ್ ಅಧಿಕಾರಿಗಳು ಇವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ (ಇಮೇಲ್ ಮುಖಾಂತರ).
2. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ ಇವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ (ಇಮೇಲ್ ಮುಖಾಂತರ).
3. ರಾಜ್ಯದ ಎಲ್ಲಾ ಪರೀಕ್ಷಾ ಕೇಂದ್ರಗಳ ಮುಖ್ಯ ಅಧೀಕ್ಷಕರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ (ಶಾಲಾ ಲಾಗಿನ್ ಮುಖಾಂತರ).
4. ಶಾಖಾಧಿಕಾರಿಗಳು, ಸಿ , ಬಿ ಮತ್ತು ಲೆಕ್ಕಾಧಿಕಾರಿಗಳು, ಲೆಕ್ಕಪತ್ರ ಶಾಖೆರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
5. ಶಾಖಾಧಿಕಾರಿಗಳು, ಗಣಕಶಾಖೆರವರು ಸದರಿ ಸುತ್ತೋಲೆಯನ್ನು ಮಂಡಳಿ ಜಾಲತಾಣ ಮತ್ತು ಶಾಲಾಲಾಗಿನ್‌ನಲ್ಲಿ ಅಪ್‌ಲೋಡ್ ಮಾಡುವುದು.
6. ಕಛೇರಿ ಪ್ರತಿ.